## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1871 |
| ಸದಸ್ಯರ ಹೆಸರು | : | ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವವರು | : | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 15-03-2022 |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಎಷ್ಟು ಅಂಗನವಾಡಿ ಕೇಂದ್ರಗಳಿವೆ, ಇರುವ ಅಂಗನವಾಡಿಗಳಲ್ಲಿ ಎಷ್ಟು ಮಕ್ಕಳಿದ್ದಾರೆ; | ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಒಟ್ಟು 1230 ಅಂಗನವಾಡಿ ಕೇಂದ್ರಗಳಿವೆ. ಈ ಅಂಗನವಾಡಿ ಕೇಂದ್ರಗಳಲ್ಲಿ ಒಟ್ಟು 62033 ಮಕ್ಕಳಿದ್ದಾರೆ. |
| ಆ) | ಮಕ್ಕಳಿಗೆ ಪ್ರತಿನಿತ್ಯ ಯಾವ ಯಾವ ಊಟ ಮತ್ತು ತಿಂಡಿಯನ್ನು ನೀಡಲಾಗುತ್ತಿದೆ; | **6 ತಿಂಗಳಿಂದ 3 ವರ್ಷದ ಮಕ್ಕಳಿಗೆ:** ಪ್ರತಿ ತಿಂಗಳು 2500 ಗ್ರಾಂ ಪುಷ್ಠಿ ಪುಡಿ ರೂಪದ ಆಹಾರ ಮನೆಗೆ ವಿತರಿಸಲಾಗುತ್ತಿದೆ. ಈ ಪುಷ್ಠಿ ಪುಡಿಯು (ಅಕ್ಕಿ ಹಿಟ್ಟು-760 ಗ್ರಾಂ, ಗೋದಿ ಹಿಟ್ಟು-140ಗ್ರಾಂ, ರಾಗಿ ಹಿಟ್ಟು-630 ಗ್ರಾಂ, ಹುರಿಗಡಲೆ-160 ಗ್ರಾಂ, ಹೆಸರು ಕಾಳು-810ಗ್ರಾಂ) ಹಾಗೂ ಇದಲ್ಲದೆ ಬೆಲ್ಲ-1ಕೆಜಿ, ಸಕ್ಕರೆ-200ಗ್ರಾಂ, ಹಾಲಿನ ಪುಡಿ-300ಗ್ರಾಂ ವಿತರಿಸಲಾಗುತ್ತಿದೆ.<br><br>**3 ರಿಂದ 6 ವರ್ಷದ ಮಕ್ಕಳಿಗೆ:** ಮಂಗಳವಾರ ಮತ್ತು ಗುರುವಾರ ಚಿತ್ರಾನ್ನ, ಮೊಳಕೆ ಬರೆಸಿದ ಹೆಸರುಕಾಳು ಮತ್ತು ಹಾಲು, ಸೋಮವಾರ, ಬುಧವಾರ, ಶುಕ್ರವಾರ ಅನ್ನ ಸಾಂಬಾರ್,ಚಿಕ್ಕಿ ಮತ್ತು ಹಾಲು, ಶನಿವಾರ ಸಿಹಿ ಪೊಂಗಲ್ ಮತ್ತು ಚಿಕ್ಕಿ ನೀಡಲಾಗುತ್ತಿದೆ. ವಾರದಲ್ಲಿ 2 ದಿನ ಮೊಟ್ಟೆ ನೀಡಲಾಗುತ್ತಿದೆ. |
| ಇ) | ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಅಪೌಷ್ಠಿಕತೆಯಿಂದ ಬಳಲುತ್ತಿರುವ ಮಕ್ಕಳ ಸಂಖ್ಯೆ ಎಷ್ಟು; | ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸಾಧಾರಣ ಅಪೌಷ್ಠಿಕತೆಯಿರುವ ಮಕ್ಕಳು-923 ಹಾಗೂ ತೀವ್ರ ಅಪೌಷ್ಠಿಕ ಮಕ್ಕಳು-42, ಒಟ್ಟು-965 ಅಪೌಷ್ಠಿಕ ಮಕ್ಕಳು ಅಪೌಷ್ಠಿಕತೆಯಿಂದ ಬಳಲುತ್ತಿದ್ದಾರೆ. |
| ಈ) | ಅಪೌಷ್ಠಿಕತೆಯನ್ನು ಹೋಗಲಾಡಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? | ಅಪೌಷ್ಠಿಕತೆಯನ್ನು ಹೋಗಲಾಡಿಸಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>• ಎಲ್ಲಾ ಮಕ್ಕಳಿಗೆ ಅಂಗನವಾಡಿ ಕೇಂದ್ರದಲ್ಲಿ ಪ್ರತಿ ದಿನ ರೂ.8.00 ಮೌಲ್ಯದ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.<br>• ತೀವ್ರ ಅಪೌಷ್ಠಿಕ ಮಕ್ಕಳಿಗೆ ಪ್ರತಿ ದಿನ ರೂ.12.00 ಮೌಲ್ಯದ ಪೂರಕ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ.<br>• ಅಂಗನವಾಡಿಗೆ ಹಾಜರಾಗುವ 3 ವರ್ಷದಿಂದ 6 ವರ್ಷದ ಎಲ್ಲಾ ಮಕ್ಕಳಿಗೆ ವಾರದಲ್ಲಿ 2 ದಿನ ಮೊಟ್ಟೆಯನ್ನು ನೀಡಲಾಗುತ್ತಿದೆ. |

| | | |
|---|---|---|
| | | • ರಾಜ್ಯ ಸರ್ಕಾರದ ಕ್ಷೀರಭಾಗ್ಯ ಯೋಜನೆಯಡಿ 6 ತಿಂಗಳಿಂದ 6 ವರ್ಷದ ಎಲ್ಲಾ ಅಂಗನವಾಡಿ ಮಕ್ಕಳಿಗೆ ವಾರದಲ್ಲಿ 5 ದಿನ 150 ಮಿ.ಲಿ ಹಾಲನ್ನು (15ಗ್ರಾಂ ಕೆನೆಭರಿತ ಹಾಲಿನಪುಡಿ, 10 ಗ್ರಾಂ ಸಕ್ಕರೆ) ನೀಡಲಾಗುತ್ತಿದೆ.<br>• 6 ತಿಂಗಳಿಂದ 3 ವರ್ಷದ ತೀವ್ರ ಅಪೌಷ್ಠಿಕ ಮಕ್ಕಳಿಗೆ ಮತ್ತು 5 ಹಿಂದುಳಿದ ಜಿಲ್ಲೆಗಳಾದ ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ ಮತ್ತು ಕೊಪ್ಪಳ ಇಲ್ಲಿಯ ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 3 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.<br>• 3 ವರ್ಷದಿಂದ 6 ವರ್ಷದ ತೀವ್ರ ಅಪೌಷ್ಠಿಕ ಮಕ್ಕಳಿಗೆ ಮತ್ತು 5 ಹಿಂದುಳಿದ ಜಿಲ್ಲೆಗಳಾದ ಬೀದರ್, ಕಲಬುರಗಿ, ರಾಯಚೂರು, ಯಾದಗಿರಿ ಮತ್ತು ಕೊಪ್ಪಳ ಇಲ್ಲಿಯ ಸಾಧಾರಣ ಅಪೌಷ್ಠಿಕ ಮಕ್ಕಳಿಗೆ ವಾರದಲ್ಲಿ 5 ದಿನ ಮೊಟ್ಟೆ ಹಾಗೂ 3 ದಿನ 200 ಎಂ.ಎಲ್ ಹಾಲನ್ನು, ಮೊಟ್ಟೆ ಸ್ವೀಕರಿಸದಿರುವ ಮಕ್ಕಳಿಗೆ ವಾರದಲ್ಲಿ 6 ದಿನ ಹಾಲನ್ನು ನೀಡಲಾಗುತ್ತಿದೆ.<br>• ತೀವ್ರ ಅಪೌಷ್ಠಿಕ ಮಕ್ಕಳಿಗೆ ಆರೋಗ್ಯ ಇಲಾಖೆಯ ಪೌಷ್ಠಿಕ ಪುನರ್ವಸತಿ ಕೇಂದ್ರ (NRC) ಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.<br>• ಆರೋಗ್ಯ ಮತ್ತು ಪೌಷ್ಠಿಕ ಶಿಬಿರಗಳನ್ನು ಏರ್ಪಡಿಸಿ ಅಧಿಕ ಪೌಷ್ಠಿಕತೆಯುಳ್ಳ ಆಹಾರಗಳನ್ನು ತಯಾರಿಸುವ ಕುರಿತು ಮತ್ತು ಮಕ್ಕಳಿಗೆ ಪೌಷ್ಠಿಕತೆಯುಳ್ಳ ಆಹಾರವನ್ನು ನೀಡಲು ತಿಳುವಳಿಕೆ ನೀಡಲಾಗುತ್ತದೆ.<br>• ಪ್ರತಿ ತಿಂಗಳು ನಡೆಸುವ ತಾಯಂದಿರ ಸಭೆಗಳಲ್ಲಿ ಅಪೌಷ್ಠಿಕತೆ ನಿವಾರಣೆ ಬಗ್ಗೆ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ತಾಯಂದಿರುಗಳಿಗೆ ತಿಳುವಳಿಕೆ ನೀಡಲಾಗುತ್ತದೆ.<br>• ಪೋಷಣ್ ಅಭಿಯಾನ ಯೋಜನೆಯಡಿ ಪ್ರತೀ ತಿಂಗಳು ಎರಡು ಬಾರಿ ಸಮುದಾಯ ಆಧಾರಿತ ಚಟುವಟಿಕೆಗಳನ್ನು ನಡೆಸಲಾಗುತ್ತಿದ್ದು, ತಾಯಂದಿರಿಗೆ ಅಪೌಷ್ಠಿಕತೆ ಬಗ್ಗೆ ತಿಳಿಸಲಾಗುತ್ತಿದೆ.<br>• ಅಂಗನವಾಡಿ ಕೇಂದ್ರಗಳಲ್ಲಿ ಎಲ್ಲಾ ಮಕ್ಕಳ ಆರೋಗ್ಯ ತಪಾಸಣೆಯನ್ನು 3 ತಿಂಗಳಿಗೊಮ್ಮೆ ನಡೆಸಲಾಗುತ್ತಿದೆ. |

**ಸಂ:** ಮಮಇ 119 ಐಸಿಡಿ 20

Halappa B.A

**(ಆಚಾರ್ ಹಾಲಪ್ಪ ಬಸಪ್ಪ)**
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು
ಮಕ್ಕಳ ಅಭಿವೃದ್ಧಿ ವಿಕಲಚೇತನರ ಹಾಗೂ
ಹಿರಿಯ ನಾಗರೀಕರ ಸಬಲೀಕರಣ ಸಚಿವರು.